ಮೈಸೂರ ಗೆಜೆಟ.

ನಂ. 2 ಸರ್ಕಾರದಿಂದ ಪ್ರಕಾಶಿಸಲ್ಪಟ್ಟದ್ದು. ಸನ್ 1890

ಬೆಂಗಳೂರು, ಶನಿವಾರ, ಜನವರಿ ತಾ|| 18, ಸನ್ 1890.

ಈ ಭಾಗವನ್ನು ಪ್ರತ್ಯೇಕ ಸೇರಿಸಿ ಇಡುವ ಬಗ್ಗೆ ಇದಕ್ಕೆ ಬೇರೆಯಾಗಿ ಪುಟ ಸಂಖ್ಯೆ ಕೊಡಲ್ಪಡುತ್ತೆ.

ವಿಷಯ ಸೂಚಿಕೆ.

1ನೇ ಭಾಗ–ಮೈಸೂರು ಮಹಾರಾಜ ರಾಜಾಸಾಹೆಬ್ ಬಹದೂರವರ ಸರ್ಕಾರದಿಂದ ಕೊಡೋಣಾದ ಇಸ್ತಿಹಾರ್‌ನಾಮೆಗಳು.

2ನೇ ಭಾಗ–ರೆಸಿಡೆಂಟರು, ಚೀಫ್ ಜಡ್ಜಿಯವರು, ಸರ್ವೇ ವ ಇನಾಂ ಸೂಪರ್‌ಟೆಂಡೆಂಟರು, ಕಾಂಪ್ಟ್ರೋಲರವರು, ಪಬ್ಲಿಕ ವರ್ಕ್ಸ್ ಆಫಿಸರ್‌ಗಳು, ಫಾರೆಸ್ಟು ಇನ್‌ಸ್ಪೆಕ್ಟರ್ ಜನರಲ್‌ಯವರು, ರಿಜಿಸ್ಟ್ರೇರ್ಷ ಇನ್‌ಸ್ಪೆಕ್ಟರ್ ಜನರಲ್ಲವರು, ಮ್ಯುನಿಸಿಪಲ್ ಬೋರ್ಡು ಪ್ರಸಿಡೆಂಟರು, ಡಿಸ್ಟ್ರಿಕ್ಟು ವ ಸೆಷನ್ಸ್ ಜಡ್ಜೀರು, ಡಿ|| ಪೆಭ್ಯೂಟಿ ಕಮ್ಮಿಷನರುಗಳು, ಸಬಾರ್ಡಿನೇಟ್ ಜಡ್ಜೀರು, ಪೊಲೀಸ್ ಸೂಪರ್‌ಟೆಂಡೆಂಟರು, ಫಾರೆಸ್ಟು ಆಫಿಸರ್‌ಗಳು, ಇವರುಗಳಿಂದ ಕೊಡೋಣಾದ ಇಸ್ತಿಹಾರ್‌ಗಳು ವಗೈರೆ; ಕಾಲಸ್ಥಿತೀ ರಿಪೋರ್ಟ್‌ಗಳು; ಪೋಸ್ಟ್ಆಫಿಸ್ ನೋಟಿಸ್‌ಗಳು.

3ನೇ ಭಾಗ–ಶ್ರೀಮಂ ಮಹಾರಾಜ ರಾಜಾಸಾಹೆಬ್ ಬಹದೂರವರಿಂದ ಮಂಜೂರ್ಮಾಡಲ್ಪಟ್ಟ ಆಕ್ಟ್‌ಗಳು ವ ರೆಗ್ಯುಲೇಷ್ಷಗಳು—ಇಲ್ಲ.

4ನೇ ಭಾಗ–ಸರ್ಕಾರೀ ಕಾಗದ ಪತ್ರಗಳು—ಇಲ್ಲ.

೧ನೇ ಭಾಗ.

ಶ್ರೀಮಂ ಮಹಾರಾಜ ರಾಜಾಸಾಹೆಬ್ ಬಹದೂರವರ ಸರ್ಕಾರದಿಂದ ಕೊಡೋಣಾದ ಇಸ್ತಿಹಾರ್‌ನಾಮೆ.

ಜನರಲ್.

ಇಸ್ತಿಹಾರ್‌ನಾಮೆ.

ತಾರೀಖು 17ನೇ ಡಿಸಂಬರ್ 1889.

ನಂ. 271.–ಸಕಲ ಜನಗಳಿಗೂ ತಿಳಿಯುವ ಬಗ್ಗೆ ಇದರಿಂದ ಪ್ರಕಟಿಸಲ್ಪಡುವದೇನಂದರೆ, (ಇದರಡಿ ಕಂಡ ತಖ್ತೆಯಲ್ಲಿ ನಮೂದಿಸಿದ ಪ್ರಕಾರ) ಜೋಡೀದಾರರಿಂದ ಸರಕಾರಕ್ಕೆ ಸಲ್ಲತಕ್ಕ ಕಂದಾಯದ ಬಾಕಿ ಸಮಾಧಾನಕ್ಕೋಸ್ಕರ ಕ್ರಮ ಪ್ರಕಾರ ಜಪ್ತೀ ಮಾಡಲ್ಪಟ್ಟಿರುವ ಈ ಕೆಳಗೆ ಕಂಡ ಜೋಡೀ ಗ್ರಾಮಸ್ಥು ಇದರಡಿ ಕಂಡ ತಖ್ತೆಯಲ್ಲಿ ನಮೂದಿರುವ ಸ್ಥಳದಲ್ಲೂ ವ ತಾರೀಖಿನಲ್ಲೂ ಬಹಿರಂಗವಾದ ಹರಾಜು ಮೂಲಕ ವಿಕ್ರಯಿಸಲ್ಪಡುವದು. ಮತ್ತು ಸದರೀ ತಾರೀಖಿನಲ್ಲಿ ಬೆಳ್ಗ್ಯೆ 11 ಘಂಟೆಗೆ ಹರಾಜು ಶುರುವಾಗಿ ಉಳಿಕೆ ಯಾವದೂ ಇಲ್ಲದೆ ಗ್ರಾಮವು ಚಡದರಖಾಸ್ತು ದಾರರಿಗೆ ಹರಾಜ್ ನಿಲ್ಲುವದು.

2. ಪರಂತು, ಬಂದು ಗ್ರಾಮವು ಬೇರೆವೇರೆಯಾಗಿ ಮಂಜೂರ್ಮಾಡಲ್ಪಟ್ಟ ವೃತ್ತಿಗಳಾಗಿ ವಿಂಗಡಿಸಲ್ಪಟ್ಟಿದ್ದರೆ, ಡೆಪ್ಯೂಟಿ ಕಮ್ಮಿಷನರವರು ತಮ್ಮ ಯಖ್ತ್ಯಾರೀ ಮೇಲೆ ಸೂರಾ ಗ್ರಾಮವನ್ನು ವಿಕ್ರಯಿಸುವದಕ್ಕೆ ಬದಲಾಗಿ ಪ್ರತಿ ಬಂದು ವೃತ್ತಿಯನ್ನೂ ಬೇರೆಬೇರೆಯಾಗಿ ಹರಾಜು ಹಾಕಿಸುವರು.

3. ಕ್ರಯದಾರನು ಹರಾಜ್ ಕಾಲದಲ್ಲಿ ಕ್ರಯದ ಮೊಬಲಗ್ ಪೈಕೀ ಶೇಕಡಾ 25 ರೂಪಾಯಿ ಡಿಪಾಜಿಟ್ ಇಡಬೇಕಾಗಿರುತ್ತೆ. ಕ್ರಯದ ಮೊಬಲಗ್ ಪೈಕೀ ಬಾಕಿಯನ್ನು ಹರಾಜು ತಾರೀಖು ಲಾಗಾಯತು 15 ದಿನಗಳೊಳಗಾಗಿ ಪಾವತಿ ಮಾಡದೆ ಇದ್ದರೆ, ಡಿಪಾಜಿಟ್ ಮೊಬಲಗು ದಂಡವಾಗಿ ತೆಗದುಕೊಳ್ಳಲಿಕ್ಕೆ ಗುರಿಯಾಗತಕ್ಕದ್ದು.

4. ಅಂಥಾ ಡಿಪಾಜಿಟ್ ಮೊಬಲಗನ್ನು ಕೊಡದೆ ಜೋದರೆ, ಅಥವಾ ಬಾಕಿ ಕ್ರಯದ ಮೊಬಲಗನ್ನು ಪಾವತಿ ಮಾಡದಿದ್ದರೆ ಜಮೀನುಗಳು ಅವ್ವಲೆ ಕ್ರಯದಾರನ ಖರ್ಚಿನಲ್ಲಿ ವ ನುಕ್ಸಾನಾಗಿ ಮರಳಿ ಹರಾಜು ಹಾಕಲ್ಪಡುವವ್ರು.

5. ಹರಾಜಿನಲ್ಲಿ ದರಖಾಸ್ತು ಮಾಡತಕ್ಕವರು ತಮ್ಮ ಸ್ವಂತಕ್ಕೆ ದರಖಾಸ್ತು ಮಾಡುತ್ತಾರೆಯೋ ಯಾ ಮುತಾಲೀಕರ ತರೀ ಖ ದರಖಾಸ್ತು ಮಾಡುತ್ತಾರೆಯೋ ಎಂಬದನ್ನು ನಮೂದಿಸತಕ್ಕದ್ದು. ಮುತಾಲೀಕರಾಗಿದ್ದ ಪಕ್ಷಕ್ಕೆ ತಮ್ಮ ಮುಖ್ಯಸ್ಥರಿಂದ ರುಜು ಮಾಡಲ್ಪಟ್ಟ ಬರವಣಿಗೆ ಮೂಲಕವಾದ ಅಧಿಕಾರ ಪತ್ರಿಕೆಯನ್ನು ಹಾಜರ್ಪಡಿಸತಕ್ಕದ್ದು. ಹಾಗಿಲ್ಲದ ಪಕ್ಷಕ್ಕೆ ಅಂಥವರ ದರಖಾಸ್ತು ತಿರಸ್ಕರಿಸಲ್ಪಡಬಹುದು.

6. ಸರ್ಕಾರದ ಹಣ ಕೊಡಲಿಕ್ಕೆ ತಪ್ಪಿದ ಮನುಷ್ಯನಾಗಲಿ, ಅವನ ತರಫಿನಲ್ಲಿ ಕೆಲಸ ನಡಿಸುವ ಅಥವಾ ಜಮೀನಿನಲ್ಲಿ ತನಗೆ ಹಕ್ಕುಂಟೆಂಬ ಇತರ ಯಾವ ಮನುಷ್ಯನಾಗಲಿ, ಹರಾಜು ಆಗುವದಕ್ಕೆ ಮುಂಚಿತವಾಗಿ ಬಡ್ಡಿ ಯಾ ಇತರ ಖರ್ಚುಗಳು ದೇಖರೇಖ್ ಕಂದಾಯದ ಬಾಕಿ ಮೊಬಲಗನ್ನು ಪೂರಾ ಹಾಜರಿ ಮಾಡಿದಾಗ್ಯೂ ಅಥವಾ ಹಿಂದಿನ ಕಂದಾಯದ ಬಾಕಿ ಮುಂತಾದ್ದು ಪಾವತಿಯಾಗಿರುತ್ತೆಂದು ತೃಪ್ತಿಕರವಾಗಿ ರುಜುವಾತು ಮಾಡಿದಾಗ್ಯೂ ಹರಾಜ್ ಮುಕ್ತಾಯ ಮಾಡಲ್ಪಡತಕ್ಕದ್ದು.

7. ದಿವಾನರವರಿಂದ ಮಂಜೂರ್ಮಾಡಲ್ಪಡುವ ಪರ್ಯಂತ ಸ್ವತ್ತಿನ ಹರಾಜು ಖಾಯಮ್ಮಾದ್ದಾಗಿರುವದಿಲ್ಲವು.

8. ಕ್ರಯದಾರನು ಕ್ರಯದ ಮೊಬಲಗನ್ನು ಪೂರ್ತಿಯಾಗಿ ಪಾವತಿ ಮಾಡಿ, ಹರಾಜನ್ನು ದಿವಾನರವರು ಖಾಯಂ ಮಾಡಿದ ಕೂಡ್ಲೆ ಗ್ರಾಮವು ಆತನ ಸುಫರ್ದು ಮಾಡಲ್ಪಟ್ಟು, ಕ್ರಯದಾರನ ಹೆಸರಿನಲ್ಲಿ ರೆಜಿಸ್ಟರ್ ಮಾಡಲ್ಪಟ್ಟು, ಡೆಪ್ಯುಟಿ ಕಮ್ಮಿಷನರವರಿಂದ ರುಜು ಮೊಹರ್ ಮಾಡೋಣಾವ ಬಂದು ಸರಟಿಫಿಕೇಟ್ ಆತನಿಗೆ ಕೊಡಲ್ಪಡುವದು. ತಪಶೀಲ್‌ನಲ್ಲಾಗಲಿ ಅಂದಾಜಾ ಬೀಜವರಿ ವಿಷಯದಲ್ಲಾಗಲಿ, ಇರುವ ಗಲ್ಲತ್‌ಗಳಿಗೆ ಸರಕಾರದವರು ಜವಾಬ್ದಾರರಲ್ಲವೆಂದು ಸ್ಪಷ್ಟವಾಗಿ ತಿಳಿಯತಕ್ಕದ್ದು.

9. ಪರಂತು, ಸದರೀ ಹರಾಜಿನಿಂದ ನುಕ್ಸಾನಪಟ್ಟಂತೆ ಎಣಿಸುವ ಜನಗಳು ಹರಾಜು ತಾರೀಖು ಲಾಗಾಯತು 30 ದಿನಗಳೊಳಗಾಗಿ ದಿವಾನರವರಿಗೆ ಅಪ್ಪೀಲ್ ಮಾಡಿಕೊಳ್ಳಲಿಕ್ಕೆ ಸ್ವತಂತ್ರರಿರುತ್ತಾರೆ, ಅಂಥಾ ಅಪ್ಪೀಲಿನಲ್ಲಿ ಆಗುವ ಆರ್ಡೆರ್ ಹುಕುಮಿಗೆ ಸದರೀ ಕ್ರಯವು ಬಳಪಟ್ಟು ಇರುತ್ತೆ.

ಜಿಲ್ಲೆಯ ತಾಲ್ಲೂಕಿನ ಹೋಬಳಿ.	ಗ್ರಾಮ.	ಜೋಡಿದಾರರ ಹೆಸರು.	ಅಂದಾಜಾ ಬೀಜವರಿ.	ಅಂದಾಜಾ ಹುಟ್ಟುವಳಿ ಯಾ ಪೇರೀಜು.	ಸ್ಥಾಲಿಯಾನಾ ಸರಕಾರಕ್ಕೆ ಕೊಡಬೇಕಾದ ಪರ್ಸೆಂಟೇಜ್.	ಯಾವ ಬಾಕಿ ಗೋಸ್ಕರ ಗ್ರಾಮವು ಹರಾಜ್ ಮಾಡಲ್ಪಡುತ್ತೋ ಅಂಥಾ ಸರಕಾರದ ಕಂದಾಯದ ಬಾಕಿ.	ಹರಾಜು ತಾರೀಖು ವಗೈರೆ.
ಕಡೂರು ತಾಲ್ಲೂಕು ನೊಣಚಗೆರೆ ಗೋಣಿಬೀಡು	ಹೊಸ್ತಿ ಗೊಣಿಬೀಡು ಅಗ್ರಹಾರ ಅದರ ದಾಖಲೆ ಗ್ರಾಮಗಳು ಸಹ	1 ಸುಬ್ಬರಾಯ ಭಟ್ಟು 2 ವಂಜಭಟ್ಟು 3 ರಾಮಣ್ಣಾ ಮಗ್ಗೆರೆ	ಖ. ಕೊ. ಇ 3610 3 0	ರೂ. ಖೆ. ಚ. 4385 5 1	ರೂ. ಖೆ. 999 0 0	ರೂ. ಖೆ. ಬಾಕಿ ಹರಾಜ್ ತಾರೀಖಿನ ವರಿಗೆ ಆಗುವ ಬಡ್ಡಿ ಸುದ 781 3 10 ಸೋಷಿನ ಪ 40 0 0 821 3 10	ಸ್ಯ 1890ನೇ ಜನವರೀ ತಾರೀಖು 20ರಲ್ಲಿ ತಾಲ್ಲೂಕ್ ಕಛೇರಿಯಲ್ಲಿ ಅನಾಲ್ ದಾರ್ರ ರೂಬರೂ.

ಪರಾ.—ಜೋಡಿದಾರರುಗಳಿಂದಲಾಗಲಿ, ಬಾಧ್ಯತೆಯ ಮೂಲಕ ಯಿವರುಗಳಿಗೆ ಹಿಂದೆ ಯಿದ್ದವರಿಂದಲಾಗಲಿ, ಉಂಟುಮಾಡಲ್ಪಟ್ಟ ಯಾವ ಹಿಡುವಳಿಗಳಿಗಾಗಲಿ, ದೇಣಿಗೆಗಳಿಗಾಗಲಿ ಹಕ್ಕುಗಳಿಗಾಗಲಿ ಅಥವಾ ಮತ್ಯಾವ ಸಂಬಂಧಗಳಿಗಾಗಲಿ ಸದರೀ ಹರಾಜು ಬಳಪಟ್ಟು ಇರುವದಿಲ್ಲ.

ತಾರೀಖು 23ನೇ ಡಿಸಂಬರ್ 1889.

ನಂ. 273.—ಬೆಂಗಳೂರಲ್ಲಿರುವ ಫಾರೆಸ್ಟ್ಸ್ ಸೂಪರ್‌ಟೆಂಡೆಂಟ್ ಮೆ|| ಜ. ಈ. ಯಂ. ರಸ್ಸೆಲ್ ಯವರಿಗೆ ಮೆಡಿಕಲ್ ಸರ್‌ಟಿಫಿಕೇಟ್ ಮೇಲೆ ಸ್ಯ 1889ನೇ ಇಸವಿ ಡಿಸಂಬರ್ 11ರ ಲಾಗಾಯತು ಒಂದು ತಿಂಗಳ ರಜಾ ಕೊಡಲ್ಪಟ್ಟಿರುತ್ತೆ.

ಮೆ|| ರಸ್ಸೆಲ್‌ಯವರು ರಜಾದ ಮೇಲೆ ಯಿರುವ ಪರಿವಿಗೆ ಬೆಂಗಳೂರು ಸಬ್ ಅಸಿಸ್ಟೆಂಟ್ ಕಣ್ಣಿಸರ್‌ವೇಟರ್ ಮೆ|| ಯಸ್. ಬಾಪೂ ರಾಯರು ಬೆಂಗಳೂರು ಫಾರೆಸ್ಟ್ ಸೂಪರ್‌ಟೆಂಡೆಂಟ್ ಕೆಲಸವನ್ನ ಆಕ್ಟಿಂಗ್ ಪರೀಕ್ ನೋಡುವಂತೆ ವೊಕರರ್ ಮಾಡಲ್ಪಟ್ಟಿರುತ್ತಾರೆ.

ನಂ. 275.—ಕೋಲಾರ ಡಿಸ್ಟ್ರಿಕ್ಟ್ ಪೊಲೀಸ್ ಸೂ|| ಮೆ|| ಸಿ. ರಾಘವಾಚಾರ್ಲು ಯವರು ಅವರು ಉಪಯೋಗಿಸಿಕೊಳ್ಳುವ ತಾರೀಖು ಲಾಗಾಯತು ವೊಂದು ತಿಂಗಳ ಪ್ರಿವಿಲೀಜ್ ರಜಾ ಕೊಡಲ್ಪಟ್ಟಿರುತ್ತಾರೆ.

ನಂ. 276.—ಹಾಸನ ಡಿಸ್ಟ್ರಿಕ್ಟ್ ಪೊಲೀಸ್ ಅಸಿಸ್ಟೆಂಟ್ ಕಮ್ಮಿಷನರ್ ಮೆ|| ದಳವಾಯಿ ದೇವರಾಜೆ ಅರಸಿನವರಿಗೆ 1889ನೇ ಇಸವಿ ಫಿಬ್ರವರಿ 5ನೇ ಮಾರ್ತ್ತಂ 7140—71—200ನೇ ನಂಬರ್ ಪ್ರೊಸೀಡಿಂಗ್ಸಿನ ನಿಬಂಧನೆಗಳನುಸರಿಸಿ 12 ದಿವಸಗಳ ಕ್ವಾಜ್ಯುಯಲ್ ರಜಾ ಕೊಡಲ್ಪಟ್ಟಿರುತ್ತೆ.

ನಂ. 277.—ಸ್ಯ 1889ನೇ ಇಸವಿ ಜೂನ್ 13ನೇ ಮಾರ್ತ್ತಂ 291—92ನೇ ನಂಬರುಳ್ಳ ಪ್ರೊಸೀಡಿಂಗ್ಸಿನ 4ನೇ ಕಲಮನು ಸರಿಸಿ, ಮೈಸೂರು ರೆವಿನ್ಯೂ ಸರ್ವೆ ಅಸಿಸ್ಟೆಂಟ್ ಸೂ|| ಮೆ|| ಯಂ. ಯಸ್. ನಾರಾಯಣರಾಯರು ಸ್ಯ 1889ನೇ ಇಸವಿ ನವಂಬರ್ ಗುರ್ತ್ಯೇ ಲಾಗಾಯತು 2ನೇ ಗ್ರೇಡಿನಿಂದ 1ನೇ ಗ್ರೇಡಿಗೆ ಬಡ್ತಿ ಮಾಡಲ್ಪಟ್ಟಿರುತ್ತಾರೆ.

ತಾರೀಖು 24ನೇ ಡಿಸಂಬರ್ 1889.

ನಂ. 274.—ಚಿಕ್ಕಬಳ್ಳಾಪುರದ ಆಕ್ಟಿಂಗ್ ಮುನಸಿಫ್ ಲಕ್ಷ್ಮೀನಾರಣಪ್ಪನವರಿಗೆ ಸೆಕೆಂಡ್ ಕ್ಲಾಸ್ ಮಾಜಿಸ್ಟ್ರೇಟರ ವ 1859ನೇ ಇಸವಿಯ XIIIನೇ ನಂಬರ್‌ವುಳ್ಳ (ಕರಾರು ತಪ್ಪಿದ ಬಗ್ಗೆ ಉಂಟಾದ) ಆಕ್ಟ್‌ನುಸರಿಸಿ ಪೊಲೀಸ್ ಮಾಜಿಸ್ಟ್ರೇಟರ ಅಧಿಕಾರಗಳನ್ನು ಕೊಡೋಣವಾಗಿರುತ್ತದೆ.

ನಂ. 278.—ಕಡೂರು ಡಿಸ್ಟ್ರಿಕ್ಟ್ ಕೊಪ್ಪ ತಾಲ್ಲೂಕು ಅಮಲ್ದಾರ್ ಲಕ್ಷ್ಮಣರಾಯರಿಗೆ, ಸೆಕೆಂಡ್ ಕ್ಲಾಸ್ ಮಾಜಿಸ್ಟ್ರೇಟರ ವ 1859ನೇ ಇಸವಿಯ XIIIನೇ ನಂಬರುಳ್ಳ (ಕರಾರು ತಪ್ಪಿದ ಬಗ್ಗೆ ಉಂಟಾದ) ಆಕ್ಟ್‌ನುಸರಿಸಿ ಪೊಲೀಸ್ ಮಾಜಿಸ್ಟ್ರೇಟರ ಅಧಿಕಾರಗಳನ್ನು ಕೊಡೋಣವಾಗಿರುತ್ತದೆ.

ನಂ. 279.—ಮೈಸೂರು ಡಿಸ್ಟ್ರಿಕ್ಟ್ ಗುಂಡ್ಲುಪೇಟೆ ತಾಲ್ಲೂಕು ಅಮಲ್ದಾರ್ ಖಾದರ್ ಅಲ್ಲೀಯವರಿಗೆ 1889ನೇ ಇಸವಿ ಫಿಬ್ರವರಿ 5ನೇ ಮಾರ್ತ್ತಂ 7140—71—200ನೇ ನಂಬರ್ ಪ್ರೊಸೀಡಿಂಗ್ಸ್ ಅನುಸರಿಸಿ ಅವರು ಉಪಯೋಗಿಸಿಕೊಳ್ಳುವ ತಾರೀಖು ಲಾಗಾಯತು 10 ದಿವಸಗಳ ಕ್ವಾಜ್ಯುಯಲ್ ರಜಾ ಕೊಡಲ್ಪಟ್ಟಿರುತ್ತೆ.

ನಂ. 280.—ಕೋಲಾರ ಡಿಸ್ಟ್ರಿಕ್ಟ್ ಅಸಿಸ್ಟೆಂಟ್ ಸರ್ಜನ್ ಜಿ. ಜಿ. ನೊರೋಹಾ ಯವರಿಗೆ 1889ನೇ ಇಸವಿ ಅಕ್ಟೋಬರ್ 17ನೇ ಮಾರ್ತ್ತಂ 600ನೇ ನಂಬರುಳ್ಳ ಇಸ್ತಿಹಾರಿನಲ್ಲಿ ಕೊಡೋಣವಾಗಿದ್ದ 45 ದಿವಸಗಳ ಪ್ರಿವಿಲೀಜ್ ರಜಾಕ್ಕೆ ಜಾಸ್ತೀಯಾಗಿ ಇದರ ದೆಕೆಯಿಂದ 8 ದಿವಸಗಳ ರಜಾ ಕೊಡಲ್ಪಟ್ಟಿರುತ್ತೆ.

ತಾರೀಖು ತಾರೀಖು 8ನೇ ಜನವರಿ 1890.

ನಂ. 281.—ಪೊಲೀಸ್ ಸೂ|| ಮೆ|| ಶೆ. ರಾಘವಾಚಾರ್ಲು ಯವರು ಕೋಲಾರ ಡಿಸ್ಟ್ರಿಕ್ಟ್ ಪೊಲೀಸ್ ಆಫಿಸಿನ ಚಾರ್ಜನ್ನು 1889ನೇ ಇಸವಿ ಡಿಸಂಬರ್ ತಾರೀಖು 27ನೇ ಪ್ರಾತಃಕಾಲ ವಹಿಸಿಕೊಂಡಿರುತ್ತಾರೆ.

ಹುಕುಂ ಬಮೋಜೀಬ್,
ಯ್. ಕೃಷ್ಣರಾವ್
ಆ|| ಅಂಡರ್ ಸೆಕ್ರಟರಿ.

ವಿದ್ಯಾಭ್ಯಾಸದ ಇಲಾಖೆ.

7ನೇ ಮಾಹೆ ಜನವರಿ 1890ನೇ ಇಸವಿ.

ಮೈಸೂರು ದೇಶೀಯ ಪರೀಕ್ಷೆ.

ಸ್ಯ 1891ನೇ ಇಸವಿಯಲ್ಲಿ ನಡೆಯುವ ಮೈಸೂರು ದೇಶೀಯ ಪರೀಕ್ಷೆಗೋಸ್ಕರ ಇದರಿಂದ ನಮೂದಿಸಿರುವ ಭಾಷಾ ಗ್ರಂಥಗಳು ನಿರ್ಣಯಿಸಲ್ಪಟ್ಟಿರುತ್ತವೆ.